# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 804

ಉತ್ತರಿಸಬೇಕಾದ ದಿನಾಂಕ : 25.09.2020.

ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ, ಹಜ್ ಹಾಗೂ ವಕ್ಫ್ ಸಚಿವರು.

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಿಗಳ ಕೊರತೆ ಎದುರಾಗಿರುವುದಾಗಿ ಪತ್ರಿಕೆಗಳಲ್ಲಿ ವರದಿ ಪ್ರಸಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ರಾಜ್ಯದ ಪಶುವೈದ್ಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಿಗಳ ಕೊರತೆ ಎದುರಾಗಿರುವುದಾಗಿ ಪತ್ರಿಕೆಗಳಲ್ಲಿ ವರದಿ ಪ್ರಸಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ | ಪಶುಸಂಗೋಪನಾ ಇಲಾಖೆಗೆ ಔಷಧಿ ಖರೀದಿ ಮಾಡಲು ಸರ್ಕಾರದಿಂದ ಅನುಮತಿ ನೀಡಲಾಗಿದೆಯೇ: | ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 58 ಪಪಾಯೋ 2020 ದಿ: 16-06-2020 ರಲ್ಲಿ 2020-21 ನೇ ಸಾಲಿನ ಅನುಮೋದಿತ ಕ್ರಿಯಾ ಯೋಜನೆಯಲ್ಲಿ ಪಶುಸಂಗೋಪನಾ ಇಲಾಖೆಗೆ ಔಷಧಿ ಖರೀದಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಅನುಮತಿ ನೀಡಿದೆ. ಸರ್ಕಾರದ ಆದೇಶ ಸಂಖ್ಯೆ: ಆಇ 03 ಟಿಎಫ್‌ಪಿ 2018, ದಿನಾಂಕ: 14-5-2018 ರನ್ವಯ ಔಷಧಿ ಮತ್ತು ರಾಸಾಯನಿಕಗಳ ಖರೀದಿ ಆದೇಶ ನೀಡಿದ್ದು, ಸರಬರಾಜು ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |
| ಇ | ಪಶು ಔಷಧಿಗಳಿಗೆ ಇಡೀ ರಾಜ್ಯದಲ್ಲಿ ಏಕರೂಪದ ಬೆಲೆ ನಿಗದಿಪಡಿಸುವ ಬಗ್ಗೆ ಸರ್ಕಾರದ ನಿಲುವೇನು: | ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶುವೈದ್ಯ ಸಂಸ್ಥೆಗಳಿಗೆ ದೈನಂದಿನ ಚಿಕಿತ್ಸೆ ನೀಡಲು ಅಗತ್ಯವಿರುವ ಔಷಧಿ, ರಾಸಾಯನಿಕಗಳು ಮತ್ತು ಫೀಡ್ ಸಪ್ಲಿಮೆಂಟ್‌ಗಳನ್ನು ಇಲಾಖೆಯ ತಾಂತ್ರಿಕ ಸಮಿತಿಯು ನಿರ್ಧರಿಸಿದ ನಂತರ, ಇಲಾಖೆಯು ಟೆಂಡರ್ ಅಧಿಸೂಚನೆ ಹೊರಡಿಸಿ ದರಗುತ್ತಿಗೆಯನ್ನು ನಿಗದಿಪಡಿಸುವ ಮುಖಾಂತರ ರಾಜ್ಯಾದ್ಯಂತ ಔಷಧಿ, |

| | | |
|---|---|---|
| | | ರಾಸಾಯನಿಕಗಳು ಮತ್ತು ಫೀಡ್ ಸಪ್ಲಿಮೆಂಟ್‌ಗಳನ್ನು ಸರಬರಾಜು ಮಾಡಲು ಏಕರೂಪ ದರ ನಿಗದಿಪಡಿಸಲು ಕ್ರಮ ಕೈಗೊಂಡಿರುತ್ತದೆ. |
| ಈ | ಪಶು ಆಸ್ಪತ್ರೆಗಳಲ್ಲಿ ಔಷಧಿಗಳು ಕೊರತೆಯಾಗದಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | 2020-21 ನೇ ಸಾಲಿನಲ್ಲಿ ರಾಜ್ಯ ವಲಯದಡಿ ಒಟ್ಟು ರೂ.1580.00 ಲಕ್ಷ ಹಾಗೂ ಜಿಲ್ಲಾ ಪಂಚಾಯತ್ ನಿಧಿಯಿಂದ ರೂ. 3500.02 ಲಕ್ಷಗಳ ಅನುದಾನದಲ್ಲಿ ಪಶುವೈದ್ಯ ಸಂಸ್ಥೆಗಳಿಗೆ ಅವಶ್ಯವಿರುವ ಔಷಧಿ, ರಾಸಾಯನಿಕಗಳು ಮತ್ತು ಫೀಡ್ ಸಪ್ಲಿಮೆಂಟ್‌ಗಳನ್ನು ಪೂರೈಸಲು ಅನುದಾನ ನಿಗದಿಪಡಿಸಲಾಗಿದ್ದು, ಈ ಪೈಕಿ ರಾಜ್ಯ ವಲಯದಡಿ ರೂ.878.50 ಲಕ್ಷಗಳಿಗೆ ಸರಬರಾಜು ಆದೇಶಗಳನ್ನು ನೀಡಲಾಗಿದ್ದು, ಔಷಧಿಗಳ ಸರಬರಾಜು ಪ್ರಕ್ರಿಯೆ ಚಾಲ್ತಿಯಲ್ಲಿದೆ. ಜಿಲ್ಲಾ ಪಂಚಾಯತ್ ನಿಧಿಯಡಿ ನಿಗದಿಪಡಿಸಲಾದ ಅನುದಾನದಲ್ಲಿ ಔಷಧಿ, ರಾಸಾಯನಿಕಗಳು ಮತ್ತು ಫೀಡ್ ಸಪ್ಲಿಮೆಂಟ್‌ಗಳನ್ನು ಪೂರೈಸಲು ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. |

ಪಸಂಮೀ ಇ-242 ಸಲೆವಿ 2020

ಪ್ರಭು ಬಿ. ಚವ್ಹಾಣ್
ಪಶುಸಂಗೋಪನೆ, ಹಜ್ ಮತ್ತು ವಕ್ಫ್ ಸಚಿವರು.